**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ.ಕೆ.ಹರಿಪ್ರಸಾದ್ ಇವರು ನಿಯಮ-330 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ:**

**ಸೂಚನೆ:-**

ರಾಜ್ಯದಲ್ಲಿ ನಿಷೇಧಿತ ಮಲಹೊರುವ ಪದ್ಧತಿಯನ್ನು ನಿಯಂತ್ರಿಸಲು, ಮನುಷ್ಯರಿಂದ ಶೌಚಗುಂಡಿಗಳನ್ನು ಸ್ವಚ್ಛಗೊಳಿಸುವ ಪದ್ಧತಿ ನಿಷೇಧ ಮತ್ತು ಪುನರ್ವಸತಿ ಕಾಯ್ದೆ-2013 ಜಾರಿಯಲ್ಲಿದ್ದರೂ, ಕಾಯಿದೆಯನ್ನು ಸಮರ್ಪಕವಾಗಿ ಜಾರಿಗೊಳಿಸದಿರುವುದು ಹಾಗೂ 1993 ರಿಂದ ಇಲ್ಲಿಯವರೆಗೆ ಮಲಗುಂಡಿಗಳನ್ನು ಸ್ವಚ್ಛಗೊಳಿಸುವ ಸಂದರ್ಭದಲ್ಲಿ ಸಾವಿಗೀಡಾದವರ ಕುಟುಂಬವರ್ಗಕ್ಕೆ ಪುನರ್ವಸತಿ ಕಲ್ಪಿಸುವುದು ಹಾಗೂ ಹೆಚ್ಚಿನ ಮೊತ್ತದ ಪರಿಹಾರ ಒದಗಿಸುವ ಕುರಿತು ನಿಯಮ 330ರ ಅಡಿಯಲ್ಲಿ ಮಾನ್ಯ ಸಮಾಜ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:-**

ಭಾರತ ಸರ್ಕಾರದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಅಧಿನಿಯಮ 2013 ರ ಕಾಯ್ದೆ ಹಾಗೂ ನಿಯಮಗಳನ್ನು ಕರ್ನಾಟಕ ಸರ್ಕಾರದಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಕಾಯ್ದೆಯಡಿಯಲ್ಲಿ ಒದಗಿಸಿರುವ ಅಧಿಕಾರ ಮತ್ತು ಕರ್ತವ್ಯಗಳಂತೆ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗವು ಕಾಯ್ದೆಯನ್ನು ಅನುಷ್ಠಾನಗೊಳಿಸುವಲ್ಲಿ ಮೇಲುಸ್ತುವಾರಿ ಮಾಡುತ್ತಿದೆ.

ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ರಾಜ್ಯ ಮೇಲುಸ್ತುವಾರಿ ಸಮಿತಿಯನ್ನು ರಚಿಸಲಾಗಿದ್ದು, ಕಾಯ್ದೆಯ ಅನುಷ್ಠಾನದ ಬಗ್ಗೆ ಕಾಲಕಾಲಕ್ಕೆ ಕ್ರಮ ಜರುಗಿಸಲಾಗುತ್ತಿದೆ. ಅದೇ ರೀತಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದಲ್ಲಿಯೂ ಸಹ ಜಿಲ್ಲಾ ಜಾಗೃತಿ ಸಮಿತಿಯನ್ನು ರಚಿಸಲಾಗಿದೆ. ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗವು ಸದರಿ ಕಾಯ್ದೆಯನ್ನು ಅನುಷ್ಠಾನಗೊಳಿಸುವಲ್ಲಿ ಮೇಲುಸ್ತುವಾರಿ ಮಾಡುತ್ತಿದೆ. ಗುರುತಿಸಲಾದ ಮ್ಯಾನ್ಯುಯಲ್ ಸ್ಕಾವೆಂಜರ್‌ಗಳಿಗೆ ಸೂಕ್ತ ಪುನರ್ವಸತಿ ಸೌಲಭ್ಯಗಳನ್ನು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ ಒದಗಿಸಲಾಗುತ್ತಿದೆ. ರಾಜ್ಯಾದ್ಯಂತ ವಿವಿಧ ಪೊಲೀಸ್ ಠಾಣೆಗಳಲ್ಲಿ ಎಂ.ಎಸ್ ಕಾಯ್ದೆ ಉಲ್ಲಂಘಿಸಿರುವ 87 ಪ್ರಕರಣಗಳನ್ನು ದಾಖಲಿಸಿದ್ದು, ನ್ಯಾಯಾಲಗಳಲ್ಲಿ ವಿಚಾರಣೆ ಹಂತದಲ್ಲಿರುತ್ತದೆ

1993 ರಿಂದ ಇಲ್ಲಿಯವರೆಗೆ ಮಲಗುಂಡಿಗಳನ್ನು ಸ್ವಚ್ಛಗೊಳಿಸುವ ಸಂದರ್ಭದಲ್ಲಿ ಸಾವಿಗೀಡಾದ 47 ಪ್ರಕರಣಗಳು ದಾಖಲಾಗಿದ್ದು, 92 ಕಾರ್ಮಿಕರು ಮೃತ ಪಟ್ಟಿರುತ್ತಾರೆ. ಸದರಿ ಮೃತಪಟ್ಟ ಕಾರ್ಮಿಕರ ಕುಟುಂಬದ ಅವಲಂಬಿತರಿಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ W.P.583/2003 ತೀರ್ಪಿನನ್ವಯ ತಲಾ ರೂ.10.00 ಲಕ್ಷ ಪರಿಹಾರವನ್ನು ವಿತರಿಸಲಾಗುತ್ತಿರುತ್ತದೆ.

ಮುಂದುವರೆದು, ಸದರಿ ಪ್ರಕರಣಗಳ ಪೈಕಿ 15 ಪ್ರಕರಣಗಳಲ್ಲಿ ಮೃತಪಟ್ಟಿರುವ ಕಾರ್ಮಿಕರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿದ್ದರಿಂದ ಅನುಸೂಚಿತ ಜಾತಿಗಳ ಮತ್ತು ಅನುಸೂಚಿತ ಬುಡಕಟ್ಟುಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ1989 ರಡಿ ಪ್ರಕರಣಗಳನ್ನು ದಾಖಲಿಸಿ ಅದರ ನಿಯಮಗಳನುಸಾರ ಮೃತರ ಕುಟುಂಬಗಳಿಗೆ ರೂ.8.25 ಲಕ್ಷಗಳನ್ನು ಸಹ ಹೆಚ್ಚುವರಿಯಾಗಿ ನೀಡಲಾಗುತ್ತಿದೆ.

ಎಂ.ಎಸ್. ಕಾಯ್ದೆ 2013 ರನ್ವಯ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ ಗುರುತಿಸಿದ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಮತ್ತು ಮೃತಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಕುಟುಂಬದ ಅವಲಂಬಿತರ 1462 ಫಲಾನುಭವಿಗಳಿಗೆ ರೂ.32.66 ಕೋಟಿಗಳ ಅನುದಾನದಲ್ಲಿ ಪುನರ್ವಸತಿ ಸೌಲಭ್ಯಗಳನ್ನು ವಿವಿಧ ಯೋಜನೆಯಡಿ ಕಲ್ಪಿಸಲಾಗಿರುತ್ತದೆ.

ಪ್ರಸ್ತುತ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮದಿಂದ 4650 ಗುರುತಿಸಿದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಗಳಿಗೆ ಒಂದು ಭಾರಿ ಸಹಾಯಧನ ತಲಾ ರೂ.40,000/- ಗಳನ್ನು ಪಾವತಿಸಲಾಗಿರುತ್ತದೆ.

ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯನ್ನು ತಡೆಗಟ್ಟಲು ರಾಜ್ಯ ಸರ್ಕಾರವು ವಿವಿಧ ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸುತ್ತಿದ್ದು, ಪೌರಾಡಳಿತ ನಿರ್ದೇಶನಾಲಯದಿಂದ ಒಟ್ಟು-542, ಬೆಂಗಳೂರು ನಗರ ನೀರು ಸರಬರಾಜು ಮಂಡಳಿವತಿಯಿಂದ ಒಟ್ಟು 240 ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಒಟ್ಟು 81 ವಿವಿಧ ಮಾದರಿಯ ಆಧುನಿಕ ಯಂತ್ರೋಪಕರಣಗಳನ್ನು ಬಳಸಲಾಗುತ್ತಿದೆ.

ಪ್ರಸ್ತುತ ಮಾನ್ಯ ಸರ್ವೋಚ್ಚ ನ್ಯಾಯಾಲಯದ W.P.No.324/2020 ರ ತೀರ್ಪಿನನ್ವಯ ಮ್ಯಾನ್ ಹೋಲ್, ಸೆಪ್ಟಿಕ್ ಟ್ಯಾಂಕ್‌ಗಳನ್ನು ಸ್ವಚ್ಛಗೊಳಿಸುವಾಗ ಮೃತಪಟ್ಟ ಕಾರ್ಮಿಕರ ಕುಟುಂಬದ ಅವಲಂಬಿತರಿಗೆ ರೂ.30.00 ಲಕ್ಷ ಹಾಗೂ ಶಾಶ್ವತ ಅಂಗವಿಕಲತೆ ಹೊಂದಿದ ಕಾರ್ಮಿಕರಿಗೆ ರೂ.20.00 ಲಕ್ಷ ಹಾಗೂ ಲಘು ಅಂಗವಿಕಲತೆ ಹೊಂದಿದ ಕಾರ್ಮಿರಕರಿಗೆ ರೂ.10.00 ಲಕ್ಷ ಪರಿಹಾರ ವಿತರಿಸುವಂತೆ ತೀರ್ಪನ್ನು ದಿನಾಂಕ:20.10.2023 ರಂದು ನೀಡಲಾಗಿರುತ್ತದೆ. ಅದರಂತೆ, ಪರಿಹಾರ ನೀಡುವ ಬಗ್ಗೆ ನಗರಾಭಿವೃದ್ಧಿ ಇಲಾಖೆಯಿಂದ ಆರ್ಥಿಕ ಇಲಾಖೆಯ ಸಹಮತಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.

**No: SWD/66/SDC/2024**

**(ಡಾ||ಹೆಚ್.ಸಿ.ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು.